# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **114 (117)** |
| ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 15.07.2024 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ.ಸಂ | ಪ್ರಶ್ನೆ | ವಿವರ |
|---|---|---|
| ಅ) | ರಾಜ್ಯದಲ್ಲಿ ಸುಮಾರು 12 ವರ್ಷಗಳಿಂದ ಸರ್ಕಾರಿ ಪ್ರಾಥಮಿಕ/ಪ್ರೌಢ ಶಾಲೆಗಳಲ್ಲಿ ದೈಹಿಕ ಶಿಕ್ಷಕರ ನೇಮಕಾತಿಗಳನ್ನು ಮಾಡಿಕೊಳ್ಳದಿರುವುದು ನಿಜವೇ; | **ಪ್ರಾಥಮಿಕ ಶಾಲೆಗೆ ಸಂಬಂಧಿಸಿದಂತೆ**<br>• ರಾಜ್ಯದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಖಾಲಿಯಿರುವ ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ ಪ್ರಸ್ತಾವನೆಯನ್ನು ಒಪ್ಪಲು ಬರುವುದಿಲ್ಲವೆಂದು ಆರ್ಥಿಕ ಇಲಾಖೆಯು ನೀಡಿದ ಅಭಿಪ್ರಾಯದಂತೆ ಸರ್ಕಾರದ ಪತ್ರ ಸಂಖ್ಯೆ: ಇಪಿ 37 ಪಿಬಿಎಸ್ 2022, ದಿನಾಂಕ:25/06/2024ರಲ್ಲಿ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ತಿಳಿಸಲಾಗಿರುತ್ತದೆ.<br>**ಪ್ರೌಢ ಶಾಲೆಗೆ ಸಂಬಂಧಿಸಿದಂತೆ**<br>• 2014-15ನೇ ಸಾಲಿನಲ್ಲಿ 148 ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳಲಾಗಿದೆ.<br>• ಸರ್ಕಾರದ ಪತ್ರ ಸಂಖ್ಯೆ: ಇಪಿ 14 ಎಲ್‌ಬಿಪಿ 2022, ದಿನಾಂಕ:13/09/2022ರ ಪತ್ರದಲ್ಲಿ ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿಯಿರುವ ದೈಹಿಕ ಶಿಕ್ಷಣ ಶಿಕ್ಷಕರ 200 ಹುದ್ದೆಗಳು ಸೇರಿ ವಿವಿಧ ವೃಂದದ ಒಟ್ಟು 2500 ಶಿಕ್ಷಕರುಗಳ ಹುದ್ದೆಗಳನ್ನು 15000 ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿಯಲ್ಲಿ ಭರ್ತಿಯಾಗದೇ ಖಾಲಿ ಉಳಿದ ಹುದ್ದೆಗಳಿಗೆ ಹೊಂದಾಣಿಕೆ ಮಾಡಿಕೊಳ್ಳುವ ಷರತ್ತಿಗೆ ಒಳಪಟ್ಟು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅನುಮತಿಯನ್ನು ನೀಡಲಾಗಿತ್ತು.<br>ಆದರೆ ಸದರಿ 15000 ಹುದ್ದೆಗಳಲ್ಲಿ ಪ್ರೌಢಶಾಲಾ ಶಿಕ್ಷಕರುಗಳ ನೇಮಕಾತಿಗೆ 1648 ಹುದ್ದೆಗಳು ಮಾತ್ರ ಉಳಿದಿರುವ ಪ್ರಯುಕ್ತ ಪ್ರಸ್ತುತ ಸಾಲಿನಲ್ಲಿ ಒಟ್ಟು 2500 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡುವ ಪ್ರಸ್ತಾವನೆಯ ಬಗ್ಗೆ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ. ಆರ್ಥಿಕ ಇಲಾಖೆಯ ಸಹಮತಿ ದೊರೆತ ನಂತರ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು. |

<table>
<tr>
<td>ಆ)</td>
<td>ರಾಜ್ಯದಲ್ಲಿ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು: ಪ್ರಾಥಮಿಕ ಪ್ರೌಢ ಶಾಲೆಗಳಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ಮತ್ತು ಸದ್ಯ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು; (ವಿವರವಾದ ಮಾಹಿತಿ ನೀಡುವುದು)</td>
<td>
<ul>
<li>ರಾಜ್ಯದಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳ ಸಂಖ್ಯೆ:41905</li>
<li>ರಾಜ್ಯದಲ್ಲಿ ಸರ್ಕಾರಿ ಪ್ರೌಢ ಶಾಲೆಗಳ ಸಂಖ್ಯೆ:4850</li>
</ul>
ಪ್ರಾಥಮಿಕ ಶಾಲೆಗೆ ಸಂಬಂಧಿಸಿದಂತೆ
<table>
<tr><th>ಮಂಜೂರಾದ ಹುದ್ದೆಗಳು</th><th>ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರುಗಳು</th></tr>
<tr><td>188531</td><td>145483</td></tr>
</table>
ಪ್ರೌಢ ಶಾಲೆಗೆ ಸಂಬಂಧಿಸಿದಂತೆ
<table>
<tr><th>ಮಂಜೂರಾದ ಹುದ್ದೆಗಳು</th><th>ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರುಗಳು</th></tr>
<tr><td>48496</td><td>39012</td></tr>
</table>
</td>
</tr>
<tr>
<td>ಇ)</td>
<td>ಈ ಸರ್ಕಾರಿ ಶಾಲೆಗಳಲ್ಲಿ ಮಂಜೂರಾಗಿ ನಿವೃತ್ತಿ ಹೊಂದಿದ ದೈಹಿಕ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಚಿಂತನೆ ನಡೆಸಿದೆಯೇ: ಹಾಗಿದ್ದಲ್ಲಿ, ಯಾವ ರೀತಿಯ ಕ್ರಮ ತೆಗೆದುಕೊಳ್ಳಲಾಗುವುದು: (ವಿವರವಾದ ಮಾಹಿತಿ ನೀಡುವುದು)</td>
<td>
ಪ್ರಾಥಮಿಕ ಶಾಲೆಗೆ ಸಂಬಂಧಿಸಿದಂತೆ<br>
ರಾಜ್ಯದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಖಾಲಿಯಿರುವ ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ ಪ್ರಸ್ತಾವನೆಯನ್ನು ಒಪ್ಪಲು ಬರುವುದಿಲ್ಲವೆಂದು ಆರ್ಥಿಕ ಇಲಾಖೆಯು ನೀಡಿದ ಅಭಿಪ್ರಾಯದಂತೆ ಸರ್ಕಾರದ ಪತ್ರ ಸಂಖ್ಯೆ: ಇಪಿ 37 ಪಿಬಿಎಸ್ 2022, ದಿನಾಂಕ:25/06/2024ರಲ್ಲಿ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ತಿಳಿಸಲಾಗಿರುತ್ತದೆ.<br>
ಪ್ರೌಢ ಶಾಲೆಗೆ ಸಂಬಂಧಿಸಿದಂತೆ<br>
ಸರ್ಕಾರದ ಪತ್ರ ಸಂಖ್ಯೆ: ಇಪಿ 14 ಎಲ್‌ಬಿಪಿ 2022, ದಿನಾಂಕ:13/09/2022ರ ಪತ್ರದಲ್ಲಿ ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿಯಿರುವ ವಿವಿಧ ವೃಂದದ ದೈಹಿಕ ಶಿಕ್ಷಣ ಶಿಕ್ಷಕರ 200 ಹುದ್ದೆಗಳು ಸೇರಿ ಒಟ್ಟು 2500 ಶಿಕ್ಷಕರುಗಳ ಹುದ್ದೆಗಳನ್ನು 15000 ಪದವೀಧರ ಪ್ರಾಥಮಿಕ ಶಾಲಾ ನೇಮಕಾತಿಯಲ್ಲಿ ಭರ್ತಿಯಾಗದೇ ಖಾಲಿ ಉಳಿದ ಹುದ್ದೆಗಳಿಗೆ ಹೊಂದಾಣಿಕೆ ಮಾಡಿಕೊಳ್ಳುವ ಷರತ್ತಿಗೆ ಒಳಪಟ್ಟು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅನುಮತಿಯನ್ನು ನೀಡಲಾಗಿತ್ತು.<br>
ಆದರೆ ಸದರಿ 15000 ಹುದ್ದೆಗಳಲ್ಲಿ ಪ್ರೌಢಶಾಲಾ ಶಿಕ್ಷಕರುಗಳ ನೇಮಕಾತಿಗೆ 1648 ಹುದ್ದೆಗಳು ಮಾತ್ರ ಉಳಿದಿರುವ ಪ್ರಯುಕ್ತ ಪ್ರಸ್ತುತ ಸಾಲಿನಲ್ಲಿ ಒಟ್ಟು 2500 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡುವ ಪ್ರಸ್ತಾವನೆಯ ಬಗ್ಗೆ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ. ಆರ್ಥಿಕ ಇಲಾಖೆಯ ಸಹಮತಿ ದೊರೆತ ನಂತರ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.
</td>
</tr>
</table>

| | | |
|---|---|---|
| ಈ) | ಸರ್ಕಾರಿ ಪಿ.ಯು.ಸಿ ಕಾಲೇಜಿನಲ್ಲಿ ಪ್ರಸ್ತುತ ಎಷ್ಟು ಜನ ದೈಹಿಕ ಶಿಕ್ಷಣ ಉಪನ್ಯಾಸಕರು ಕಾರ್ಯ ನಿರ್ವಹಿಸುತ್ತಿದ್ದಾರೆ; (ಮಾಹಿತಿ ನೀಡುವುದು). | ಶಾಲಾ ಶಿಕ್ಷಣ ಇಲಾಖೆ (ಸರ್ಕಾರಿ ಪದವಿ ಪೂರ್ವ ಕಾಲೇಜು) ಯಲ್ಲಿ ಯಾರೂ ದೈಹಿಕ ಶಿಕ್ಷಣ ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿಲ್ಲ. |
| ಉ) | ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿಯಿಂದ ತೆರವಾಗಿರುವ ದೈಹಿಕ ಶಿಕ್ಷಣ ಉಪನ್ಯಾಸಕರನ್ನು ನೇಮಕಾತಿ ಮಾಡಿಕೊಳ್ಳದಂತೆ ಆರ್ಥಿಕ ಇಲಾಖೆಯಿಂದ ಟಿಪ್ಪಣಿ ರೂಪದಲ್ಲಿ ಆದೇಶ ಬಂದಿದೆಯೇ; ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು) | ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 43 ಟಿಪಿಯು 2018 ದಿನಾಂಕ:09-10-2019ರಲ್ಲಿ the Karnataka Pre-University Education (Academic, Registration, Administration and Grant-in-aid etc.,) (Amendment) Rules, 2019ನ್ನು ಜಾರಿಗೆ ತರಲಾಗಿದೆ. ಸದರಿ ತಿದ್ದುಪಡಿ ನಿಯಮಗಳನ್ವಯ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಕರ ಹುದ್ದೆಗಳನ್ನು ಅನುದಾನಕ್ಕೆ ಒಳಪಡಿಸಲು ಪ್ರಥಮ ಮತ್ತು ದ್ವಿತೀಯ ಪಿಯುಸಿ ತರಗತಿ ಸೇರಿ ಕನಿಷ್ಠ 120 ವಿದ್ಯಾರ್ಥಿಗಳ ಸಂಖ್ಯಾಬಲವನ್ನು ನಿಗದಿಪಡಿಸಿ ಆದೇಶಿಸಿದೆ.<br><br>ಮುಂದುವರೆದು ಇತ್ತೀಚೆಗೆ ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:FD/637/EXP-8/2022(EXP-8) ದಿನಾಂಕ:14-06-2023ರಲ್ಲಿ ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಕರ ಹುದ್ದೆಗೆ 120 ವಿದ್ಯಾರ್ಥಿಗಳ ಸಂಖ್ಯಾ ಬಲವನ್ನು ನಿಗದಿಪಡಿಸಿರುವುದರಿಂದ ರಾಜ್ಯದ 728 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ 22 ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ತಲಾ 01 ದೈಹಿಕ ಶಿಕ್ಷಣ ಉಪನ್ಯಾಸಕರಂತೆ ಒಟ್ಟು 750 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಯನ್ನು ಸೃಜಿಸಬೇಕಾಗಿದ್ದು, ರಾಜ್ಯದ ಬೊಕ್ಕಸಕ್ಕೆ ಹೆಚ್ಚಿನ ಆರ್ಥಿಕ ಹೊರೆ ಉಂಟಾಗುವುದನ್ನು ಪರಿಗಣಿಸಿ, ಸದರಿ 120 ವಿದ್ಯಾರ್ಥಿಗಳ ಸಂಖ್ಯಾಬಲದ ಬದಲಿಗೆ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗೆ 500 ವಿದ್ಯಾರ್ಥಿಗಳ ಸಂಖ್ಯಾಬಲವನ್ನು ನಿಗಧಿಪಡಿಸುವಂತೆ ಆರ್ಥಿಕ ಇಲಾಖೆಯು ಸಲಹೆ ನೀಡಿದೆ. ಹೀಗೆ 500 ವಿದ್ಯಾರ್ಥಿಗಳ ಸಂಖ್ಯಾಬಲವನ್ನು ನಿಗಧಿಪಡಿಸುವಾಗ ಪ್ರಸ್ತುತ ಮಂಜೂರು ಮಾಡಿದ ಹುದ್ದೆಗಳನ್ನು ಸದರಿ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವವರು ಸೇವೆಯಲ್ಲಿರುವವರೆಗೆ ಸಂರಕ್ಷಿಸಬಹುದೆಂದು ಸಹ ತಿಳಿಸಿದೆ. ಆರ್ಥಿಕ ಇಲಾಖೆಯು 500 ವಿದ್ಯಾರ್ಥಿಗಳ ಸಂಖ್ಯಾ ಬಲದ ಬದಲಿಗೆ 12 ವಿದ್ಯಾರ್ಥಿಗಳ ಸಂಖ್ಯಾ ಬಲವನ್ನು ನಿಗದಿಪಡಿಸುವ ಬಗ್ಗೆ ಮರು ಪರಿಗಣಿಸಿ ಅಭಿಪ್ರಾಯ ನೀಡುವಂತೆ ಕೋರಿ ಮತ್ತೊಮ್ಮೆ ಕಡತವನ್ನು ಆರ್ಥಿಕ ಇಲಾಖೆಗೆ ಕಡತ ಸಲ್ಲಿಸಲಾಗಿದ್ದು, ಪ್ರಸ್ತುತ ಕಡತವು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ. |

ಸಂಖ್ಯೆ: ಇಪಿ138 ಎಲ್‌ಬಿಪಿ 2024

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು